# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೆ. ಪ್ರತಾಪಸಿಂಹ ನಾಯಕ್ ಇವರು ನಿಯಮ–72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳಲ್ಲಿ ಸಾಕಷ್ಟು ವರ್ಷಗಳ ಹಿಂದೆಯೇ ಅನುಮೋದನೆಗೊಂಡು ಈಗಾಗಲೇ ಹಲವಾರು ವರ್ಷಗಳ ಸೇವೆ ಸಲ್ಲಿಸಿರುವ ಮತ್ತು ಹೊಸದಾಗಿ ಅನುಮೋದನೆಗೊಂಡು ಇತ್ತೀಚಿಗೆ ಸೇವೆಗೆ ಸೇರಿದ ಗ್ರಾಮ ಪಂಚಾಯತಿ ನೌಕರರುಗಳಿಗೆ ಬಹುತೇಕ ಒಂದೇ ಮೊತ್ತದ ವೇತನ ನೀಡಲಾಗುತ್ತಿದೆ. ಸಾಕಷ್ಟು ವರ್ಷಗಳ ಹಿಂದೆಯೇ ಅನುಮೋದನೆಗೊಂಡು ಈಗಾಗಲೇ ಹಲವಾರು ವರ್ಷಗಳ ಸೇವೆ ಸಲ್ಲಿಸಿರುವ ಗ್ರಾಮ ಪಂಚಾಯತಿ ನೌಕರರ ಸೇವೆಗೆ ಸೂಕ್ತ ಹಾಗೂ ನ್ಯಾಯಸಮ್ಮತ ಮಾನ್ಯತೆ ದೊರೆಯದೆ ಸಾಕಷ್ಟು ಅನ್ಯಾಯವಾಗಿರುತ್ತದೆ.

ಈ ಸಂಬಂಧ ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ನೌಕರರ ಹುದ್ದೆಗಳಿಗೆ ಸಂಬಂಧಿಸಿದಂತೆ ವೇತನ ಶ್ರೇಣಿಗಳನ್ನು ನಿಗದಿ ಮಾಡಿ ಅಳವಡಿಸದೇ ಇರುವುದರಿಂದ, ಸೇವಾವಧಿಗೆ ತಕ್ಕಂತೆ ವೇತನ ದೊರೆಯದೇ ತಾರತಮ್ಯ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

****

**ಉತ್ತರ:** ಭಾರತ ಸಂವಿಧಾನದ ಅನುಚ್ಛೇದ 243 ಬಿ ರಂತೆ ಗ್ರಾಮ ಪಂಚಾಯತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯತಿಯು ಸ್ಥಳೀಯ ಪ್ರಾಧಿಕಾರವಾಗಿದ್ದು, ಸದರಿ ಅಧಿನಿಯಮದ, ಪ್ರಕರಣ 112 ರಡಿ ಸರ್ಕಾರವು ಆದೇಶದ ಮೂಲಕ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದ ಮಾದರಿ, ನೇಮಕಾತಿ ವಿಧಾನ ಮತ್ತು ವೇತನ ಶ್ರೇಣಿ ನಿಗಧಿಪಡಿಸಿದ್ದು, ಅದರಂತೆ ಮಂಜೂರಾದ ಹುದ್ದೆಗಳಿಗೆ ಗ್ರಾಮ ಪಂಚಾಯತಿಯು ಪ್ರಕರಣ 113 ರಂತೆ ನೇಮಕಾತಿ ಮಾಡಿಕೊಂಡು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆದುಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಸ್ಥಳೀಯ ಪ್ರಾಧಿಕಾರವಾದ ಗ್ರಾಮ ಪಂಚಾಯತಿಯ ಖಾಯಂ ನೌಕರರಾಗಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯ ಸಿಬ್ಬಂದಿಗಳ ವೇತನವನ್ನು ಗ್ರಾಮ ಪಂಚಾಯತಿ ನಿಧಿಯಿಂದ ಅಂದರೆ ಸ್ವಂತ ಸಂಪನ್ಮೂಲದಿಂದ ಪಾವತಿಸುವುದು, ಪ್ರತಿಯೊಂದು ಗ್ರಾಮ ಪಂಚಾಯತಿಯ ಕರ್ತವ್ಯವಾಗಿರುತ್ತದೆ.

ಆದಾಗ್ಯೂ ರಾಜ್ಯದ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಸಂಪನ್ಮೂಲದ ಕೊರತೆಯಿಂದ ಸಮಯಕ್ಕೆ ಸರಿಯಾಗಿ ಸಿಬ್ಬಂದಿಗಳ ವೇತನ ಪಾವತಿಸದ ಕಾರಣ ರಾಜ್ಯ ಹಣಕಾಸು ಆಯೋಗದ ಅನುದಾನಡಿ ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡುವ ಅನುದಾನದಲ್ಲಿ ಭಾಗಶಃ ವೇತನಕ್ಕಾಗಿ ಪ್ರತ್ಯೇಕ ಅನುದಾನವನ್ನು ಅಂದರೆ ರೂ.811.00 ಕೋಟಿಗಳನ್ನು 4 ತ್ರೈಮಾಸಿಕ ಕಂತುಗಳಲ್ಲಿ ಬಿಡುಗಡೆ ಮಾಡುತ್ತಿದೆ. ಜುಲೈ 2022 ರಿಂದ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಬಿ.ಎಂ.ಎಸ್. ಮುಖಾಂತರ ವೇತನ ಪಾವತಿ ಮಾಡಲಾಗುತ್ತಿದೆ.

ಪ್ರಸ್ತುತ ಗ್ರಾಮ ಪಂಚಾಯಿತಿ ನೌಕರರಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ನ್ನು ರೂಪಿಸಲಾಗಿರುತ್ತದೆ.

ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಗ್ರಾಮ ಪಂಚಾಯತಿಯು ಪಾವತಿಸುತ್ತಿದೆ. ಪ್ರಸ್ತುತ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ ಈ ಕೆಳಕಂಡಂತಿದೆ.

| ಕ್ರ. ಸಂ. | ಹುದ್ದೆಯ ಹೆಸರು | **ದಿನಾಂಕ:01-04-2023 ರಿಂದ ದಿನಾಂಕ: 31-03-2024 ಸಾಲಿಗೆ ಪ್ರತಿ ಹುದ್ದೆಗೆ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ (ರೂ.ಗಳಲ್ಲಿ)** |
|---|---|---|
| 1 | ಬಿಲ್ ಕಲೆಕ್ಟರ್ | 16738 |
| 2 | ಕ್ಲರ್ಕ್, ಕ್ಲರ್ಕ್/ಡಾಟಾ ಎಂಟ್ರಿ ಆಪರೇಟರ್ | 16738 |
| 3 | ವಾಟರ್ ಆಪರೇಟರ್ | 15051 |
| 4 | ಅಟೆಂಡೆಂಟ್ | 14415 |
| 5 | ಕ್ಲೀನರ್ಸ್ | 17561 |

ಮೇಲ್ಕಂಡಂತೆ ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸೇವಾ ಹಿರಿತನದ ಮೇಲೆ ವೇತನ ನಿಗಧಿ ಮತ್ತು ವೇತನ ಹೆಚ್ಚಳ ಮಾಡುವ ಬಗ್ಗೆ ನಿರ್ದೇಶಕರು (ಆಡಳಿತ-1), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದ್ದು, ಸಮಿತಿ ನೀಡುವ ವರದಿಯನ್ನು ಪರಿಶೀಲಿಸಿ ಸರ್ಕಾರವು ಸೇವಾ ಹಿರಿತನದ ಮೇಲೆ ವೇತನ ನಿಗಧಿ ಮತ್ತು ವೇತನ ಹೆಚ್ಚಳ ಮಾಡುವ ಬಗ್ಗೆ ಕ್ರಮ ವಹಿಸಲಾಗುವುದು.

ಸಂಖ್ಯೆ:ಗ್ರಾಅಪ 137 ಗ್ರಾಪಂಅ 2023.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.